ಎಸ್‌ಸಿಸಿಹೆಚ್-*11 1* ಎಮ್‌ವಿಸಿ **9042**/2024

ಪಿಡಬ್ಲ್ಯೂ1 ಸುರೇಶ್

**<u>ದಿನಾಂಕ 12.12.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ಐಎಂವಿ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು **ನಿಪಿ 5** ಎಂದು, ಡಿಸ್ಚಾರ್ಜ್ ಸಮರಿಯನ್ನು **ನಿಪಿ 6** ಎಂದು, ಮೋಟಾರು ವಾಹನ ಕಾಯ್ದೆಯ ಕಲಂ 133 ರಡಿ ನೀಡಿರುವ ನೋಟೀಸು ಮತ್ತು ಸದರಿ ನೋಟೀಸಿಗೆ ನೀಡಿರುವ ಉತ್ತರದ ದೃಢೀಕೃತ ಪ್ರತಿಗಳನ್ನು ಕ್ರಮವಾಗಿ **ನಿಪಿ 7 ಮತ್ತು 8** ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 9** ಎಂದು, ಮೆಡಿಕಲ್ ಬಿಲ್ಲುಗಳನ್ನು **ನಿಪಿ 10** ಎಂದು, ವೈದ್ಯರ ಸಲಹಾ ಚೀಟಿಗಳನ್ನು **ನಿಪಿ 11** ಎಂದು, ಹಣ ಪಾವತಿ ರಶೀದಿಗಳನ್ನು **ನಿಪಿ 12** ಎಂದು, ಕ್ಷ-ಕಿರಣಗಳನ್ನು **ನಿಪಿ 13** ಎಂದು, ಆಧಾರ್ ಕಾರ್ಡಿನ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಯನ್ನು **ನಿಪಿ 14** ಎಂದು ಗುರುತಿಸಲಾಯಿತು.

1 ಮತ್ತು 2ನೇ ಎದುರುದಾರರ ಪರ ಮಾನ್ಯ ವಕೀಲರು ಪ್ರತಿವಾದ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**